*ಚಿಕಿತ್ಸೆ ನೀಡಿ ಪ್ರಾಣ ಹಾನಿ ತಪ್ಪಿಸಲು ಹಾಲಿ ಇರುವ ಸಾರ್ವಜನಿಕ ಆಸ್ಪತ್ರೆಗಳಿಗೆ ಸೌಲಭ್ಯ ಮತ್ತು ಸವಲತ್ತುಗಳನ್ನು ಒದಗಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ?*

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನಾ ಅಡಿಯಲ್ಲಿ ರಾಜ್ಯದ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಸಂಭವಿಸಬಹುದಾದ ಅಪಘಾತಗಳಿಂದಾದ ಗಾಯಾಳುಗಳಿಗೆ ತುರ್ತು ಚಿಕಿತ್ಸೆ ಒದಗಿಸುವ ದೃಷ್ಟಿಯಿಂದ ನೆಲಮಂಗಲ ಪಟ್ಟಣದಲ್ಲಿ ತುರ್ತು ಚಿಕಿತ್ಸಾ ಘಟಕವನ್ನು ಸ್ಥಾಪಿಸಲಾಗಿದೆ. ಈ ಘಟಕದಲ್ಲಿ ಒಂದು ಶಸ್ತ್ರ ಚಿಕಿತ್ಸಾ ಕೊಠಡಿ ಹತ್ತು ಹಾಸಿಗೆಗಳ ಸಾಮರ್ಥ್ಯದ ಒಂದು ವಾರ್ಡ್ ಇದ್ದು ಎಕ್ಸರೇ ಉಪಕರಣಗಳನ್ನು ಒದಗಿಸಲಾಗಿದೆ. ಒಂದು ಸುಸಜ್ಜಿತ ತುರ್ತು ವಾಹನವನ್ನು ಸಹಾ ಒದಗಿಸಲಾಗಿದೆ.

## ರಾಜ್ಯದಲ್ಲಿರುವ ವೃತ್ತಿಪರ ಶಿಕ್ಷಕರ ಖಾಲಿ ಹುದ್ದೆಗಳು

948 - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದ ಪ್ರೌಢ ಮತ್ತು ಪ್ರಾಥಮಿಕ ಶಾಲೆಯಲ್ಲಿ ಎಷ್ಟು ವೃತ್ತಿ ಪರ (ತೋಟಗಾರಿಕೆ) ಶಿಕ್ಷಕರ ಹುದ್ದೆ ಖಾಲಿ ಇದೆ?*

*ಆ) ಕೊಡಗು ಜಿಲ್ಲೆಯಲ್ಲಿ ಎಷ್ಟು ಖಾಲಿ ಇದೆ?*

*ಇ) ಇದನ್ನು ತುಂಬಲು ಸರ್ಕಾರವು ಏನು ಕ್ರಮಕೈಗೊಳ್ಳುವುದು, ಇವುಗಳನ್ನು ಯಾವಾಗ ತುಂಬಲಾಗುತ್ತದೆ, (ವಿವರ ಒದಗಿಸುವುದು)*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಇಲ್ಲಾ.

ಆ) ಇಲ್ಲಾ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

## ಸೋಮವಾರ ಪೇಟೆ ತಾಲ್ಲೂಕು ಮುರಾರ್ಜಿ ವಸತಿ ನಿಲಯ

949 - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಸೋಮವಾರಪೇಟೆ ತಾಲ್ಲೂಕು, ಕುಶಾಲನಗರ ಹೋಬಳಿ, ಬಸವನಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಎಷ್ಟು ಹಣ ನಿಗದಿಪಡಿಸಲಾಗಿದೆ?*